# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 379 |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16.02.2023 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಅರ್ಕಾವತಿ ಬಡಾವಣೆಗೆ ಸಂಬಂಧಿಸಿದಂತೆ ಭೂಸ್ವಾಧೀನದಿಂದ ಕೈಬಿಟ್ಟಿರುವ/ಹೊರತುಪಡಿಸಿರುವ ಜಮೀನುಗಳ ಅಕ್ರಮಗಳ ಬಗ್ಗೆ ತನಿಖೆ ನಡೆಸಲು ನ್ಯಾಯಮೂರ್ತಿ ಹೆಚ್.ಎಸ್. ಕೆಂಪಣ್ಣ ವಿಚಾರಣಾ ಆಯೋಗವನ್ನು ರಚಿಸಲಾಗಿದ್ದು, ಅದರ ವರದಿಯ ಪರಿಶೀಲನೆಯು ಯಾವ ಹಂತದಲ್ಲಿದೆ; | ಅರ್ಕಾವತಿ ಬಡಾವಣೆಗೆ ಸಂಬಂಧಿಸಿದಂತೆ ಭೂಸ್ವಾಧೀನದಿಂದ ಕೈಬಿಟ್ಟಿರುವ /ಭೂಸ್ವಾಧೀನದಿಂದ ಹೊರತುಪಡಿಸಿರುವ ಜಮೀನುಗಳಿಗೆ ಸಂಬಂಧಿಸಿದಂತೆ ಮಾನ್ಯ ನಿವೃತ್ತ ನ್ಯಾಯಮೂರ್ತಿ ಹೆಚ್.ಎಸ್. ಕೆಂಪಣ್ಣ ಇವರ ಅಧ್ಯಕ್ಷತೆಯಲ್ಲಿ ವಿಚಾರಣಾ ಆಯೋಗವನ್ನು ರಚಿಸಿ ದಿನಾಂಕ:16.08.2014ರಂದು ಆದೇಶಿಸಲಾಗಿತ್ತು. ಮಾನ್ಯ ನಿವೃತ್ತ ನ್ಯಾಯಮೂರ್ತಿ ಹೆಚ್.ಎಸ್. ಕೆಂಪಣ್ಣ ವಿಚಾರಣಾ ಆಯೋಗವು ದಿನಾಂಕ:23.08.2017 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ.<br><br>ಸದರಿ ವರದಿಯ ಮೇಲೆ ತೆಗೆದುಕೊಳ್ಳಬೇಕಾದ ಸೂಕ್ತ ಅನುಪಾಲನಾ ಕ್ರಮಗಳೊಂದಿಗೆ ಇಂತಹ ಪ್ರಕರಣಗಳು ಮರುಕಳಿಸದಂತೆ ಕ್ರಮವಹಿಸಲು ಹಾಗೂ ಸೂಕ್ತ ಸಲಹೆಗಳನ್ನು ನೀಡಲು ಸಚಿವ ಸಂಪುಟವು ದಿನಾಂಕ:04.09.2017ರಂದು ಕೈಗೊಂಡ ನಿರ್ಣಯದಂತೆ ಅಂದಿನ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರನ್ನೊಳಗೊಂಡ ಹಿರಿಯ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿತ್ತು.<br><br>ಸದರಿ ಅಧಿಕಾರಿಗಳ ಸಮಿತಿಯು ಮಾನ್ಯ ನಿವೃತ್ತ ನ್ಯಾಯಮೂರ್ತಿ ಹೆಚ್.ಎಸ್. ಕೆಂಪಣ್ಣ ವಿಚಾರಣಾ ಆಯೋಗವು ನೀಡಿರುವ ವರದಿಯನ್ನು ಪರಿಶೀಲಿಸಿ, ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ | ಆಯೋಗವನ್ನು ರಚಿಸಿ ಸುಮಾರು ವರ್ಷಗಳು ಗತಿಸಿದ್ದರೂ ಇನ್ನೂ ವರದಿಗಳು ಪರಿಶೀಲನೆ ಆಗದಿರಲು ಕಾರಣಗಳೇನು; ಇದರಿಂದ ತಪ್ಪಿತಸ್ಥರಿಗೆ, ಅಕ್ರಮ ಎಸಗಿದವರಿಗೆ ಶಿಕ್ಷೆ ನೀಡುವಲ್ಲಿ ವಿಳಂಬವಾಗುವುದಿಲ್ಲವೆ; | |
| ಇ | ಆಯೋಗಗಳನ್ನು ರಚಿಸಿ ಅದು ನೀಡಿರುವ ವರದಿಗಳನ್ನು ಅನುಷ್ಠಾನಕ್ಕೆ ತರದಿದ್ದಲ್ಲಿ ಹಾಗೂ ಆಯೋಗಗಳ ವರದಿಗಳನ್ನು ಪರಿಶೀಲನೆ ಮಾಡಿ ಮಂಡಿಸದೇ ಇದ್ದಲ್ಲಿ ಆಯೋಗಗಳಿಗೆ ವೆಚ್ಚ ಮಾಡಿರುವ ಹಣ ಸರ್ಕಾರದ ಬೊಕ್ಕಸಕ್ಕೆ ನಷ್ಟವಾದಂತೆ ಅಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | |

ಸಂಖ್ಯೆ: ನಅಇ 46 ಬೆಂಭೂಸ್ವಾ 2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ